ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 27-04-2017

# ಪತ್ರಿಕಾ ಪ್ರಕಟಣೆ

1. ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಶ್ರೀ ಶಿವಮೂರ್ತಿ ನಾಯಕ್ ಕಚೇರಿ ಪ್ರವೇಶ:

   ದಿನಾಂಕ: 28-04-2017 ರ ಶುಕ್ರವಾರ, ಸಮಯ: ಬೆಳಿಗ್ಗೆ 10-30 ಗಂಟೆಗೆ

   ಸ್ಥಳ: ಕೊಠಡಿ ಸಂಖ್ಯೆ 119, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು

2. **Farewell Address to Hon'ble Justice Shri Anand Byrareddy, Judge, High Court of Karnataka on his retirement.**

**Farewell Address:**

**Chairman,**
**Karnataka State Bar Council,**
**Bengaluru.**

**Date: 28-04-2017 Friday, Time : 2.00 PM.**

**Place: No. 1 of the Court Hall, Principal Bench of the High Court of Karnataka.**

## <u>ಪತ್ರಿಕಾ ಪ್ರಕಟಣೆ</u>

# <u>ಏಪ್ರಿಲ್ 29 ರಂದು ಬಸವ ಜಯಂತಿ</u>

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಏಪ್ರಿಲ್ 29 ರಂದು ಶನಿವಾರ ಬೆಳಿಗ್ಗೆ 11.00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಬಸವ ಜಯಂತಿಯನ್ನು ಹಮ್ಮಿಕೊಂಡಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಶ್ರೀಮತಿ ಉಮಾಶ್ರೀ ಅವರು ನೆರವೇರಿಸಲಿದ್ದಾರೆ.

ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಹಾಗೂ ಶಾಸಕರು, ಚಿಕ್ಕಪೇಟೆ ಕ್ಷೇತ್ರ ಆರ್.ವಿ. ದೇವರಾಜ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಬಸವ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9.00 ಗಂಟೆಗೆ ಬಸವೇಶ್ವರ ವೃತ್ತದಿಂದ (ಹೋಟೆಲ್ ಚಾಲುಕ್ಯ ಹತ್ತಿರ) ರವೀಂದ್ರ ಕಲಾಕ್ಷೇತ್ರದವರೆಗೆ ಬಸವಣ್ಣನವರ ಸ್ತಬ್ದ ಚಿತ್ರದೊಂದಿಗೆ ಜಾನಪದ ಕಲಾ ತಂಡಗಳ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿದೆ.

ವಿವಿಧ ಜಿಲ್ಲೆಗಳ ಜಾನಪದ ಕಲಾತಂಡಗಳು ಈ ಸ್ತಬ್ದ ಚಿತ್ರ ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿವೆ. ಅಂದು ಬೆಳಿಗ್ಗೆ 10.00 ರಿಂದ 11.00 ಗಂಟೆವರೆಗೆ ಕುಮಾರ ಕಣವಿ ಮತ್ತು ಕು. ಮಾಲಾಶ್ರೀ ಕಣವಿ ಅವರಿಂದ ವಚನ ಗಾಯನ ಹಾಗೂ ಮಧ್ಯಾಹ್ನ 1.00 ರಿಂದ 2.00 ಗಂಟೆವರೆಗೆ ಬೆಂಗಳೂರಿನ ರಂಗಭಾರತಿ ತಂಡದವರಿಂದ ವಚನ ರೂಪಕ – ಸಿಂಗಿರಾಜ ಕಾರ್ಯಕ್ರಮ ನಡೆಯಲಿದೆ.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆ ಸಚಿವ ಈಶ್ವರ ಖಂಡ್ರೆ, ಶ್ರೀಮತಿ ಶಕುಂತಲ ಟಿ. ಶೆಟ್ಟಿ ಶಾಸಕರು, ಪುತ್ತೂರು ವಿಧಾನ ಸಭಾ ಕ್ಷೇತ್ರ ಹಾಗೂ ಸಂಸದೀಯ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಶಾಮನೂರು ಶಿವಶಂಕರಪ್ಪ, ಶಾಸಕರು, ದಾವಣಗೆರೆ ವಿಧಾನಸಭಾ

ಕ್ಷೇತ್ರ ಹಾಗೂ ಅಧ್ಯಕ್ಷರು, ಅಖಿಲ ಭಾರತ ವೀರಶೈವ ಮಹಾಸಭಾ, ಬೆಂಗಳೂರು ಇವರುಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಾಹಿತಿಗಳು ಮತ್ತು ಚಿಂತಕರಾದ ಡಾ. ಬಸವರಾಜ ಸಬರದ ಅವರಿಂದ ವಿಶೇಷ ಉಪನ್ಯಾಸ ನಡೆಯಲಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸರ್ಕಾರದ ಕಚೇರಿಗಳಲ್ಲಿ
## ಬಸವೇಶ್ವರರ ಭಾವಚಿತ್ರ ಕಡ್ಡಾಯವಾಗಿ ಪ್ರದರ್ಶಿಸಲು ಸೂಚನೆ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಏಪ್ರಿಲ್ 29 ರಂದು ಆಚರಿಸುವ ಹನ್ನೆರಡನೇ ಶತಮಾನದ ಸಮಾಜ ಸುಧಾರಕರಾದ ಜಗಜ್ಯೋತಿ ಬಸವೇಶ್ವರರ ಜಯಂತಿ ಸಂದರ್ಭದಲ್ಲಿ ಬಸವೇಶ್ವರವರ ಭಾವಚಿತ್ರವನ್ನು ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸುವಂತೆ ಸರ್ಕಾರ ಸೂಚಿಸಿದೆ.

ತಮ್ಮ ವಚನಗಳ ಮೂಲಕ ಮೂಢ ನಂಬಿಕೆ, ಕಂದಾಚಾರ ಹಾಗೂ ಸಮಾಜದ ಲೋಪದೋಷಗಳನ್ನು ತಿದ್ದುವಲ್ಲಿ ಬಹುವಾಗಿ ಶ್ರಮಿಸಿರುವ ಹಿನ್ನೆಲೆಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಏಪ್ರಿಲ್ 29 ರಂದು "ಬಸವ ಜಯಂತಿ" ಯನ್ನು ಆಚರಿಸಲಾಗುತ್ತಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಬಸವೇಶ್ವರರ ಭಾವಚಿತ್ರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ರೈತನ ಆತ್ಮಹತ್ಯೆ ಪ್ರಕರಣ –
## ರೈತನ ನೆರವಿಗೆ ಎಲ್ಲಾ ಕ್ರಮ ಸಚಿವರ ಭರವಸೆ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಕೋಲಾರ ತಾಲ್ಲೂಕಿನ ವೇಮಗಲ್ ಹೋಬಳಿಯ ವೀರಾಪುರ ಗ್ರಾಮದ ಶ್ರೀರಾಮಪ್ಪ ಎಂಬ ರೈತನು ನಿನ್ನೆ ಸಂಜೆ ಜಿಲ್ಲಾಧಿಕಾರಿಯವರ ಕಚೇರಿಯ ಎದುರು ಆತ್ಮಹತ್ಯೆಗೆ ಪ್ರಯತ್ನಿಸಿರುವ ವಿಷಯ ನನ್ನ ಮನಸ್ಸಿಗೆ ತೀವ್ರ ಅಘಾತ ಉಂಟು ಮಾಡಿದೆ

ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ. ಆರ್. ರಮೇಶ್ ಕುಮಾರ್ ಅವರು ದುಖಃ ವ್ಯಕ್ತ ಪಡಿಸಿದ್ದಾರೆ.

ರೈತ ಬೇಗ ಚೇತರಿಸಿಕೊಳ್ಳಲು ಹಾಗೂ ದು:ಖದಲ್ಲಿರುವ ಆತನ ಕುಟುಂಬಕ್ಕೆ ಶಕ್ತಿಯನ್ನು ತುಂಬಲೆಂದು ಪ್ರಾರ್ಥಿಸುತ್ತೇನೆ. ಸಂಕಷ್ಟದಲ್ಲಿರುವ ರೈತರ ನೆರವಿಗೆ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿ ಪ್ರಾಮಾಣಿಕವಾಗಿ ಬಗೆಹರಿಸಲು ಪ್ರಯತ್ನ ಮಾಡುತ್ತೇನೆ.

ರೈತರಿಗೆ ಈ ತರಹದ ಅಸಹಾಯಕ ಸ್ಥಿತಿ ಒದಗಿ ಬರುತ್ತಿರುವುದಕ್ಕೆ ನನಗೆ ಅಪರಾಧದ ಪ್ರಜ್ಞೆ ಕಾಡುತ್ತಿದೆ. ಎಲ್ಲಾ ರೈತ ಸಮುದಾಯಕ್ಕೆ ಕೈಜೋಡಿಸಿ ಬೇಡಿಕೊಳ್ಳುವುದೇನೆಂದರೆ ಎಲ್ಲರೂ ಒಟ್ಟಾಗಿ ಸೇರಿ ಸಮಸ್ಯೆಯನ್ನು ಪರಿಹರಿಸೋಣ.

ಆತ್ಮಹತ್ಯೆಯಂತಹ ಪ್ರಯತ್ನವನ್ನು ತಡೆಗಟ್ಟುವುದಕ್ಕೆ ತಾವುಗಳೆಲ್ಲರೂ ಸಹಕರಿಸಬೇಕೆಂದು ತಮ್ಮಲ್ಲಿ ಈ ಮೂಲಕ ಕೈಜೋಡಿಸಿ ವಿನಂತಿಸಿಕೊಳ್ಳುತ್ತಿದ್ದೇನೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕೆ. ಆರ್. ರಮೇಶ್ ಕುಮಾರ್ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

# ಮಹಿಳಾ ಉದ್ದಿಮೆದಾರರಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಪ್ರೋತ್ಸಾಹ

**ಬೆಂಗಳೂರು ಏಪ್ರಿಲ್ 27 (ಕರ್ನಾಟಕ ವಾರ್ತೆ)**

**ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ವಿಶೇಷ ಯೋಜನೆಯಡಿಯಲ್ಲಿ ರೂ.3286.21 ಕೋಟಿಗಳ ಅವಧಿ ಸಾಲವನ್ನು ಸುಮಾರು 29890 ಮಹಿಳಾ ಉದ್ದಿಮೆದಾರರಿಗೆ ನೀಡುವ ಮೂಲಕ ಯಶಸ್ವಿ ಉದ್ದಿಮೆದಾರರಾಗುವಂತೆ ಪ್ರೇರೇಪಿಸಿದೆ.**

**ಸುಮಾರು 20,776 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಿಮೆದಾರರಿಗೆ ಒಟ್ಟು ರೂ.1,265.94 ಕೋಟಿ ಮೊತ್ತದ ಹಣಕಾಸಿನ ನೆರವನ್ನು ನೀಡುವ ಮೂಲಕ ಉದ್ದಿಮೆಗಳನ್ನು ಸ್ಥಾಪಿಸಲು ಸಂಸ್ಥೆಯು ಸಹಾಯಹಸ್ತ ನೀಡಿದೆ.**

ಸಂಸ್ಥೆಯ ಒಟ್ಟಾರೆ ಮಂಜೂರಾತಿಯಾದ ರೂ.733.42 ಕೋಟಿಗಳಲ್ಲಿ ಶೇ.51ರಷ್ಟು ಅಂದರೆ ರೂ.375.94 ಕೋಟಿ ಮೊತ್ತವನ್ನು ಮಹಿಳಾ ಉದ್ದಿಮೆದಾರರಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಿಮೆದಾರರಿಗೆ ಶೇ.4ರ ಬಡ್ಡಿ ಸಹಾಯ ಧನ ಯೋಜನೆಯಡಿಯಲ್ಲಿ ಹಾಗೂ ಮೊದಲ ಪೀಳಿಗೆ ಉದ್ದಿಮೆದಾರರಿಗೆ ಶೇ.8ರ ಬಡ್ಡಿ ಸಹಾಯ ಧನದ ವಿಶೇಷ ಯೋಜನೆಯಡಿಯಲ್ಲಿ ಸಂಸ್ಥೆಯು ಸಾಲ ಮಂಜೂರು ಮಾಡಿದೆ. ಇನ್ನುಳಿದ ಶೇ.49ರಷ್ಟು ಮೊತ್ತವನ್ನು ಸಾಮಾನ್ಯ ಯೋಜನೆಯಡಿಯಲ್ಲಿ ಮಂಜೂರು ಮಾಡಲಾಗಿದೆ.

ಇದಲ್ಲದೆ, ಅಲ್ಪ ಸಂಖ್ಯಾತ ವರ್ಗಗಳ ಉದ್ದಿಮೆದಾರರಿಗೆ ಉತ್ತೇಜನ ನೀಡಲು ಸಂಸ್ಥೆಯವತಿಯಿಂದ ರೂ.11,282.94 ಕೋಟಿ ಮೊತ್ತದ ಹಣಕಾಸಿನ ನೆರವನ್ನು 19,052 ಉದ್ದಿಮೆದಾರರಿಗೆ ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಕೈಗಾರಿಕೀಕರಣವನ್ನು ಉತ್ತೇಜಿಸಲು ಕಳೆದ 58 ವರ್ಷಗಳಿಂದಲೂ ಸತತವಾಗಿ ಸಂಸ್ಥೆಯು 1,71,414 ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ಘಟಕಗಳ (MSMEs) ಸ್ಥಾಪನೆಗೆ ಒಟ್ಟು ರೂ.15,276.05 ಕೋಟಿ ಮೊತ್ತವನ್ನು ಮಂಜೂರು ಮಾಡುವ ಮೂಲಕ ಗಮನಾರ್ಹ / ಅಸಾಧಾರಣ ಸೇವೆಯನ್ನು ಸಂಸ್ಥೆಯು ಮಾಡಿದೆ.

ಹಣಕಾಸಿನ ವರ್ಷದ ಪ್ರಾರಂಭದಲ್ಲಿದ್ದ ರೂ.238.00 ಕೋಟಿ ಮೊತ್ತದ ಅನುತ್ಪಾದಕ ಆಸ್ತಿಗಳಲ್ಲಿ ಇಳಿಕೆ ಕಂಡು ಬಂದಿದ್ದು ಅದು 31-03-2017ರ ವರೆಗೆ ರೂ.219.00 ಕೋಟಿಗಳಾಗಿದೆ. ಹಿಂದಿನ ವರ್ಷದಲ್ಲಿ ಶೇ.13.47ರಷ್ಟಿದ್ದ ಒಟ್ಟು ಅನುತ್ಪಾದಕ ಆಸ್ತಿಯು ಪ್ರಸಕ್ತ ವರ್ಷದಲ್ಲಿ ಶೇ.12 ರಷ್ಟಾಗಿದ್ದು, ಪ್ರಸ್ತುತ ವರ್ಷದಲ್ಲಿ ಮತ್ತಷ್ಟು ಇಳಿಕೆಯಾಗಬಹುದೆಂದು ಅಂದಾಜಿಸಲಾಗಿದೆ.

ರೂ.733.42 ಕೋಟಿಗಳ ಒಟ್ಟಾರೆ ಮಂಜೂರಾತಿಯಲ್ಲಿ ತಯಾರಿಕಾ ವಲಯಕ್ಕೆ ರೂ.309.21 ಕೋಟಿ ಮೊತ್ತದ ಹಣಕಾಸಿನ ನೆರವನ್ನು ಸಂಸ್ಥೆಯಿಂದ ನೀಡಲಾಗಿದ್ದು, ಅದು ಒಟ್ಟು ಮಂಜೂರಾತಿಯ ಶೇ.42ರಷ್ಟಿದೆ. ಪ್ರವಾಸೋದ್ಯಮ ವಲಯ ಹಾಗೂ ರಿಯಲ್ ಎಸ್ಟೇಟ್ ವಾಣಿಜ್ಯ ವಲಯಕ್ಕೆ ಅನು ಕ್ರಮವಾಗಿ ರೂ.77.30 ಕೋಟಿ ಹಾಗೂ 58.91 ಕೋಟಿ ಮೊತ್ತದ ಹಣಕಾಸಿನ ನೆರವನ್ನು ನೀಡಲಾಗಿದ್ದು ಒಟ್ಟು ಮಂಜೂರಾತಿಯಲ್ಲಿ ಪ್ರತೀ ವಲಯದ ಪಾಲು ಶೇ.11 ಹಾಗೂ 8 ರಷ್ಟಿದೆ. ಇನ್ನುಳಿದ ಮೊತ್ತವಾದ ರೂ.37.39 ಕೋಟಿ ಮತ್ತು 250.59 ಕೋಟಿಗಳು ಒಟ್ಟು ಮಂಜೂರಾತಿಯ ಶೇ.39ರಷ್ಟಿದ್ದು ಅದು ಆರೋಗ್ಯ ಹಾಗೂ ಇತರೆ ವಲಯಗಳ ಪಾಲಿನದ್ದಾಗಿದೆ.

ಸಂಸ್ಥೆಯು ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ಹಾಗೂ ಸೇವಾ ಕ್ಷೇತ್ರದ ವಲಯದಲ್ಲಿನ ಉದ್ದಿಮೆಗಳ ಸ್ಥಾಪನೆಗೆ ಹಣಕಾಸಿನ ನೆರವು ನೀಡುವುದರ ಮೂಲಕ ಅವುಗಳಿಗೆ ಒಂದು ಅತ್ಯಾಧುನಿಕ ವೇದಿಕೆಯನ್ನು ಸೃಷ್ಟಿಸಿ, ಉತ್ತೇಜಿಸುವ ದೂರದರ್ಶಿತ್ವವನ್ನು ಹೊಂದಿರುತ್ತದೆ. ಈ ಬೆಳವಣಿಗೆಯು ಉದ್ಯಮಶೀಲತೆಗೆ ಉತ್ತೇಜನ, ಹೂಡಿಕೆ ಮತ್ತು ಸಾಮಾಜಿಕ ಆರ್ಥಿಕ ಅಭಿವೃದ್ಧಿಗೆ ಬೇಕಾದ ಉದ್ಯೋಗಾವಕಾಶ ಹಾಗೂ ರಾಜ್ಯದ ಬೆಳವಣಿಗೆಗೆ ಕಾರಣವಾಗಿದೆ. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ಉದ್ದಿಮೆದಾರರನ್ನು ಬೆಂಬಲಿಸಲು ಹಾಗೂ ಉದ್ದಿಮೆದಾರರ ಕನಸುಗಳನ್ನು ಸಾಕಾರಗೊಳಿಸಲು ಅವರೊಂದಿಗೆ ಸದಾ ಇದ್ದೇ ಇರುತ್ತದೆ.

# ಗೆಜೆಟೆಡ್ ಪ್ರೊಬೆಷನರ್ಸ್ ಪರೀಕ್ಷೆ ಅಂಕ ಪ್ರಕಟ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗ 2015 ರಲ್ಲಿ ಅಧಿಸೂಚಿಸಿದ ಒಟ್ಟು 464 ಗೆಜೆಟೆಡ್ ಪ್ರೊಬೆಷನರ್ಸ್ 2014 ರ ನೇಮಕಾತಿಗೆ ಸಂಬಂಧಿಸಿದಂತೆ ಮುಖ್ಯಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಯಲ್ಲಿ/ವ್ಯಕ್ತಿತ್ವ ಪರೀಕ್ಷೆಯಲ್ಲಿ (ಅರ್ಹರಾಗಿದ್ದಲ್ಲಿ) ಪಡೆದ ಅಂಕಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಆಯೋಗದ ವೆಬ್‌ಸೈಟ್ http://kpsc.kar.nic.in ನಿಂದ ಅಂಕಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಇಚ್ಛಿಸುವ ಅಭ್ಯರ್ಥಿಗಳು ಅವರ ವಿವರಗಳನ್ನು ನೀಡಿದಲ್ಲಿ ಆನ್-ಲೈನ್ ಅರ್ಜಿಯಲ್ಲಿ ಅವರು ನೋಂದಾಯಿಸಿರುವ ಇ-ಮೇಲ್ ವಿಳಾಸಕ್ಕೆ ಈ ಬಗ್ಗೆ ಸೂಚನೆ ಕಳುಹಿಸಲಾಗುವುದು.